University Affiliation Copy

Azadi Ka Amrit Mahotsav

# ಹಾಸನ ವಿಶ್ವವಿದ್ಯಾಲಯ

ಹೇಮಗಂಗೋತ್ರಿ ಹಾಸನ

# HASSAN UNIVERSITY

HEMAGANGOTHRI HASSAN – 573226

Sri Adichunchanagiri First Grade College Channarayapatna Est.1979

ಕುಲಸಚಿವರ ಕಾರ್ಯಾಲಯ
Office of the Registrar

E-mail-reg.hassan.uni@gmail.com
Tel-08172-220015

ವಿಷಯ: 2023-24ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ಮುಂದುವರಿಸುವ ಬಗೆಗೆ.

ಉಲ್ಲೇಖ: 1) ಸ್ಥಳೀಯ ವಿಚಾರಣಾ ಸಮಿತಿ ಭೇಟಿ ನೀಡಿದ ದಿನಾಂಕ: 17.06.2023
2) ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ ದಿನಾಂಕ: 23.06.2023
3) ಸಿಂಡಿಕೇಟ್ ಸಭೆಯ ನಿರ್ಣಯದ ದಿನಾಂಕ: 23.06.2023

*****

**ಸಂಯೋಜನೆ ಮುಂದುವರಿಕೆ' ಮಂಜೂರಾತಿ ಆದೇಶ ಸಂಖ್ಯೆ ಸಿಡಿಸಿ /63 /2023-24 ದಿನಾಂಕ: 28.06.2023**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000, ಪ್ರಕರಣ 59 (17)ರ ಮೇರೆಗೆ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ಸೂಚಿಸಿರುವ ಷರತ್ತುಗಳಿಗೆ ಒಳಪಟ್ಟು ಮತ್ತು ಅವುಗಳನ್ನು ಕಾರ್ಯಗತಗೊಳಿಸುವಂತೆ ಸೂಚಿಸಿ ಕೆಳಕಂಡ ಕಾಲೇಜಿಗೆ ಪಟ್ಟಿಯಲ್ಲಿ ಸೂಚಿಸಿರುವ ಕೋರ್ಸು/ವಿಷಯಗಳಿಗೆ 2023-24ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ಪ್ರಾಧಿಕಾರಗಳ ಅನುಮೋದನೆಯೊಡನೆ ಶಾಶ್ವತ/ತಾತ್ಕಾಲಿಕ ಸಂಯೋಜನಾ ಮುಂದುವರಿಕೆಗೆ ಮಂಜೂರಾತಿ ಆದೇಶ ನೀಡಲಾಗಿದೆ.

**ಕಾಲೇಜಿನ ಹೆಸರು:** ಶ್ರೀ ಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜು, ಚನ್ನರಾಯಪಟ್ಟಣ , ಹಾಸನ

**ಶಾಶ್ವತ ಸಂಯೋಜನೆ:**

| ಶಿಕ್ಷಣ | ಭಾಷೆಗಳು | ಐಚ್ಛಿಕಗಳು | ವಿಭಾಗ | ಒಟ್ಟು ಪ್ರವೇಶ ಮಿತಿ |
|---|---|---|---|---|
| ಬಿ.ಎ. | ಕನ್ನಡ, ಇಂಗ್ಲೀಷ್, ಹಿಂದಿ, ಸಂಸ್ಕೃತ, ಉರ್ದು | ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಭೂಗೋಳಶಾಸ್ತ್ರ, ಕನ್ನಡ | 05 | 450 |
| ಬಿ.ಎಸ್ಸಿ. | | ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ, ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ | 02 | 120 |
| ಬಿ.ಕಾಂ. | | ವಿಶ್ವವಿದ್ಯಾಲಯದ ಪಠ್ಯಕ್ರಮ | 01 | 60 |

**ಮುಂದುವರಿಕೆ ಸಂಯೋಜನೆ:**

| ಶಿಕ್ಷಣ | ಭಾಷೆಗಳು | ಐಚ್ಛಿಕಗಳು | ವಿಭಾಗ | ಒಟ್ಟು ಪ್ರವೇಶ ಮಿತಿ |
|---|---|---|---|---|
| ಬಿ.ಕಾಂ. | ಕನ್ನಡ, ಇಂಗ್ಲೀಷ್, ಹಿಂದಿ, ಸಂಸ್ಕೃತ, ಉರ್ದು | ವಿಶ್ವವಿದ್ಯಾಲಯದ ಪಠ್ಯಕ್ರಮ | 02 | 120 |

ಪು.ತಿ.ನೋ

ವಿ.ಸೂ.:

1. ಸಂಯೋಜನಾ ಮಂಜೂರಾತಿ ಆದೇಶದಲ್ಲಿ ನೀಡಿರುವ ಕೋರ್ಸು/ವಿಷಯ/ವಿಷಯ ಸಮೂಹಗಳಿಗೆ ನಿಗದಿಪಡಿಸಿರುವ ಪ್ರವೇಶಾತಿ ಸಂಖ್ಯೆಗೆ ಮಾತ್ರ ಪ್ರವೇಶ ಮಾಡಿಕೊಳ್ಳತಕ್ಕದ್ದು. ಸಂಯೋಜನಾ ಮಂಜೂರಾತಿ ಆದೇಶ ನೀಡದೇ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ಹೊಸದಾಗಿ ಶಿಫಾರಸ್ಸು ಮಾಡದಿರುವ ಕೋರ್ಸು/ವಿಷಯ/ವಿಷಯ ಸಮೂಹಗಳಿಗೆ ಪ್ರವೇಶಾತಿ ಸಂಖ್ಯೆಯನ್ನು ಮೀರಿ ಪ್ರವೇಶ ಮಾಡಿಕೊಳ್ಳತಕ್ಕದ್ದಲ್ಲ.
2. ಸ್ಥಳೀಯ ವಿಚಾರಣಾ ಸಮಿತಿಯು ನೀಡಿರುವ ವರದಿಯಲ್ಲಿ ಶಿಫಾರಸ್ಸು ಮಾಡಿದ್ದರೂ/ಸರ್ಕಾರದ ಅನುಮೋದನೆ ದೊರೆತಿದ್ದರೂ ವಿಶ್ವವಿದ್ಯಾಲಯದ ಸಂಯೋಜನಾ ಮಂಜೂರಾತಿ ಆದೇಶ ಪಡೆಯದೇ ಯಾವುದೇ ಕೋರ್ಸು/ವಿಷಯ/ವಿಷಯ ಸಮೂಹಗಳಿಗೆ ಪ್ರವೇಶಾತಿ ಸಂಖ್ಯೆಯನ್ನು ಮೀರಿ ಪ್ರವೇಶ ಮಾಡಿಕೊಳ್ಳತಕ್ಕದ್ದಲ್ಲ. ಅಂತಹ ಸಂದರ್ಭದಲ್ಲಿ ಆಗಬಹುದಾದ ತೊಂದರೆಗಳಿಗೆ ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂಬ ಅಂಶವನ್ನು ಗಮನಿಸತಕ್ಕದ್ದು.
3. ಸರ್ಕಾರದ ನಿಯಮಾವಳಿಯಂತೆ ಜಿ.ಎಸ್.ಟಿ ಮತ್ತು ಇತರೆ ಶುಲ್ಕಗಳನ್ನು ಪಾವತಿಸಬೇಕಾದ ಸಂದರ್ಭದಲ್ಲಿ ತೆರಿಗೆ ಮತ್ತು ಶುಲ್ಕಗಳನ್ನು ಪಾವತಿಸುವ ನಿಯಮಕ್ಕೆ ಬದ್ಧರಾಗಿರತಕ್ಕದ್ದು.

**<u>ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರತ್ತುಗಳು:</u>**

- Guest faculties should be motivated to get KSET & NET eligibility.
- Result is poor, should be improved.
- Teaching faculties should attain PhD degrees.

ವಿಶ್ವವಿದ್ಯಾಲಯದ ಶೈಕ್ಷಣಿಕ ವೇಳಾಪಟ್ಟಿಯ ಪ್ರಕಾರ ಪ್ರವೇಶಾತಿ ಮಾಡಿಕೊಳ್ಳತಕ್ಕದ್ದು. ವಿಶ್ವವಿದ್ಯಾಲಯ ಹಾಗೂ ಸರ್ಕಾರದ ಷರತ್ತುಗಳನ್ನು 2023-24ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರಾರಂಭಕ್ಕೆ ಮುನ್ನ ತಪ್ಪದೇ ಪಾಲಿಸುವುದು ಮತ್ತು ಇದರ ಸಂಬಂಧ ಅಗತ್ಯ ದಾಖಲೆಗಳೊಡನೆ ಸಮರ್ಪಕ ಅನುಪಾಲನಾ ವರದಿಯನ್ನು ಒಂದು ತಿಂಗಳೊಳಗಾಗಿ ಕಾಲೇಜು ಅಭಿವೃದ್ಧಿ ಮಂಡಳಿ ಕಛೇರಿಗೆ ತಲುಪಿಸುವುದು. ಪರೀಕ್ಷಾ ನಿಯಮ/ಪ್ರವೇಶಾತಿ ಮತ್ತು ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಕುಲಸಚಿವರು

ಕುಲಸಚಿವರು
ಹಾಸನ ವಿಶ್ವವಿದ್ಯಾಲಯ
ಹೇಮಗಂಗೋತ್ರಿ
ಹಾಸನ-573 226

ಗೆ,

ಪ್ರಾಂಶುಪಾಲರು,
ಶ್ರೀ ಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜು,
ಚನ್ನರಾಯಪಟ್ಟಣ
ಹಾಸನ ಜಿಲ್ಲೆ – 573116

**ಪ್ರತಿಗಳು:**

1. ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್.ಅಂಬೇಡ್ಕರ್ ರಸ್ತೆ, ಬೆಂಗಳೂರು-560 001.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
4. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಹುಣಸೂರು ರಸ್ತೆ, ಮೈಸೂರು.
5. ಕುಲಸಚಿವರು, ಹಾಸನ ವಿಶ್ವವಿದ್ಯಾಲಯ, ಹಾಸನ.
6. ಕುಲಸಚಿವರು (ಪರೀಕ್ಷಾಂಗ), ಹಾಸನ ವಿಶ್ವವಿದ್ಯಾಲಯ, ಹಾಸನ.
7. ಉಪಕುಲಸಚಿವರು (ಶೈಕ್ಷಣಿಕ), ಹಾಸನ ವಿಶ್ವವಿದ್ಯಾಲಯ, ಹಾಸನ.
8. ಕುಲಪತಿಗಳ/ಕುಲಸಚಿವರ ಆಪ್ತ ಸಹಾಯಕರು, ಹಾಸನ ವಿಶ್ವವಿದ್ಯಾಲಯ, ಹಾಸನ.
9. ಅಧೀಕ್ಷಕರು, ಸಿಡಿಸಿ/ಕಛೇರಿ ಪ್ರತಿ/ರಕ್ಷಾ ಕಡತಕ್ಕೆ.

Principal
Sri Adichunchanagiri First Grade College
Channarayapatna